# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ರಹಿತ ಪ್ರಶ್ನೆ ಸಂಖ್ಯೆ | 965(1136) |
| ಸದಸ್ಯರ ಹೆಸರು | ಶ್ರೀ ದಿನೇಶ್ ಗೂಳಿಗೌಡ (ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 22.09.2022 |

| ಕ್ರ.ಸಂ | ಪ್ರಶ್ನೆಗಳು | ಉತ್ತರ |
|---|---|---|
| ಅ. | ಮಂಡ್ಯ ಜಿಲ್ಲೆ, ನಾಗಮಂಗಲ ತಾಲ್ಲೂಕು, ಹೊನಕೆರೆ ಹೋಬಳಿ, ಮರಡಿಪುರದಿಂದ ಕೆಂಪನಕೊಪ್ಪಲು ಗ್ರಾಮಕ್ಕೆ ಹೋಗುವ ರಸ್ತೆ ಹಾಳಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಸದರಿ ರಸ್ತೆಯನ್ನು ಊರಿನ ಗ್ರಾಮಸ್ಥರು ಹಾಗೂ ರೈತರುಗಳು ತಮ್ಮ ಗದ್ದೆಗಳಿಗೆ ಹೋಗಲು ಈ ರಸ್ತೆಯನ್ನೇ ಅವಲಂಬಿತರಾಗಿರುವುದರಿಂದ ಗ್ರಾಮಸ್ಥರಿಗೆ ಹಾಗೂ ರೈತರಿಗೆ ಓಡಾಡಲು ಅನಾನುಕೂಲವಾಗುವ ಸಲುವಾಗಿ ಯಾವಾಗ ರಸ್ತೆಯನ್ನು ಡಾಂಬರೀಕರಣ ಮಾಡಲಾಗುವುದು. | ಬಂದಿದೆ.<br><br>ಪ್ರಸ್ತಾಪಿತ ರಸ್ತೆಯು ಸುಮಾರು 900ಮೀ ಉದ್ದವಿದ್ದು, ಡಿಆರ್‌ಆರ್‌ಪಿ ಪಟ್ಟಿಯಲ್ಲಿ ಸೇರಿರುತ್ತದೆ. (ವಿಆರ್-433) ರಸ್ತೆಯ ಅಭಿವೃದ್ಧಿಗಾಗಿ ಸುಮಾರು ರೂ.40.00ಲಕ್ಷಗಳ ಅನುದಾನದ ಅಗತ್ಯವಿರುತ್ತದೆ. ಈ ಕುರಿತು ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಂದ ಪ್ರಸ್ತಾವನೆ ಸ್ವೀಕೃತವಾದ ನಂತರ ಅನುದಾನ ಲಭ್ಯತೆಯನ್ನಾಧರಿಸಿ ಕ್ರಮವಹಿಸಲಾಗುವುದು. |
| ಆ. | ಸದರಿ ಕಾಮಗಾರಿಗೆ 3054 ನಿರ್ವಹಣಾರಡಿ ಲಭ್ಯವಿರುವ ಅನುದಾನದಲ್ಲಿ ಕೈಗೊಳ್ಳುವಂತೆ ಜಿಲ್ಲಾ ಪಂಚಾಯತ್ ಸೂಚಿಸಲಾಗುವುದೇ; ಇನ್ನೂ ಮರಡಿಪುರದಿಂದ ಕೆಂಪನಕೊಪ್ಪಲು ಗ್ರಾಮದ ರಸ್ತೆಯನ್ನು ಡಾಂಬರೀಕರಣಕ್ಕೆ ಸರ್ಕಾರದಿಂದ ಹಣವನ್ನು ಬಿಡುಗಡೆ ಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಇಲ್ಲ<br>ಲೆ.ಶೀ. 3054 ನಿರ್ವಹಣಾ ಯೋಜನೆ – ಟಾಸ್ಕ್‌ಫೋರ್ಸ್‌ರಡಿ ರಸ್ತೆಗಳ ನಿರ್ವಹಣೆಗೆ ಹಂಚಿಕೆ ಮಾಡಿದ ಅನುದಾನವನ್ನು ಆಯಾ ವಿಧಾನಸಭಾ ಕ್ಷೇತ್ರದ ಮಾನ್ಯ ಶಾಸಕರ ಅಧ್ಯಕ್ಷತೆಯಲ್ಲಿ ರಚಿಸಿರುವ ಟಾಸ್ಕ್‌ಫೋರ್ಸ್ ಸಮಿತಿಯು ನಿರ್ವಹಣೆಗೆ ತುರ್ತು ಅಗತ್ಯವಿರುವ ರಸ್ತೆಗಳನ್ನು ಆಯ್ಕೆ ಮಾಡಿ ಕ್ರಿಯಾ ಯೋಜನೆಯನ್ನು ತಯಾರಿಸಿ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿ.ಪಂ. ರವರು ಅನುಮೋದನೆ ನೀಡುತ್ತಾರೆ.<br><br>ಮರಡಿಪುರದಿಂದ ಕೆಂಪನಕೊಪ್ಪಲು ಗ್ರಾಮದ ರಸ್ತೆಯನ್ನು ಡಾಂಬರೀಕರಣಕ್ಕೆ ಸರ್ಕಾರದಿಂದ ಹಣವನ್ನು ಬಿಡುಗಡೆಯಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆ. |
| ಇ. | ಬಂದಿದ್ದಲ್ಲಿ, ಸರ್ಕಾರವು ಸದರಿ ಕಾಮಗಾರಿಗೆ ಹಣವನ್ನು ಯಾವಾಗ ಬಿಡುಗಡೆ ಮಾಡಲಾಗುವುದು ಮತ್ತು ರಸ್ತೆ ಕಾಮಗಾರಿಯನ್ನು ಯಾವಾಗ ಪ್ರಾರಂಭ ಮಾಡಲಾಗುವುದು? | ಅನುದಾನ ಲಭ್ಯತೆಯನ್ನಾಧರಿಸಿ ಹಣ ಬಿಡುಗಡೆ ಮಾಡಲು ಹಾಗೂ ರಸ್ತೆ ಕಾಮಗಾರಿಯನ್ನು ಪ್ರಾರಂಭ ಮಾಡಲು ಕ್ರಮವಹಿಸಲಾಗುವುದು. |

ಸಂಖ್ಯೆ:ಗ್ರಾಅಪ:ಎಲ್‌ಸಿಕ್ಯೂ: 965 (1136):147ನೇಅ:2022

(ಬಸವರಾಜ ಬೊಮ್ಮಾಯಿ)
ಮುಖ್ಯಮಂತ್ರಿ